# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:2024-25ನೇ ಸಾಲಿನ ಆಯವ್ಯಯ ಭಾಷಣದ "ಕಂಡಿಕೆ ಸಂಖ್ಯೆ:197" ರಲ್ಲಿ ಘೋಷಿಸಿರುವಂತೆ ಬೀದರ್‌ನಲ್ಲಿರುವ ಶ್ರೀ ನಾನಕ್ ಝೀರಾ ಸಾಹೇಬ್ ಗುರುದ್ವಾರದ ಅಭಿವೃದ್ಧಿಗಾಗಿ ಒಂದು ಕೋಟಿ ಅನುದಾನವನ್ನು ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ: 1. 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ ಸಂಖ್ಯೆ-197.
2. ಆರ್ಥಿಕ ಇಲಾಖೆಯ ಆಯವ್ಯಯ ಸಲಹಾ ಟಿಪ್ಪಣಿ ಸಂಖ್ಯೆ: ಆಇ 175 ವೆಚ್ಚ-3/2024 ದಿನಾಂಕ:23/04/2024.
3. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಇ-ಕಛೇರಿ ಕಡತ ಸಂಖ್ಯೆ: DOM/DEVP/JSD/15/2024.

ಪ್ರಸ್ತಾವನೆ:-

ಮೇಲೆ ಓದಲಾದ (1)ರ 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ -197 ರಲ್ಲಿ ಈ ಕೆಳಗಿನಂತೆ ಘೋಷಿಸಿರುತ್ತಾರೆ.

***"ಬೀದರ್‌ನಲ್ಲಿರುವ ಶ್ರೀ ನಾನಕ್ ಝೀರಾ ಸಾಹೇಬ್ ಗುರುದ್ವಾರದ ಅಭಿವೃದ್ಧಿಗಾಗಿ ಒಂದು ಕೋಟಿ ರೂ. ಅನುದಾನ ನೀಡಲಾಗುವುದು".***

ಮೇಲಿನ ಆಯವ್ಯಯ ಘೋಷಣೆಯು ಹೊಸ ಯೋಜನೆಯಾಗಿದ್ದು, ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಜೈನ್, ಬೌದ್ಧ ಮತ್ತು ಸಿಖ್ ಸಮುದಾಯಗಳ ಅಭಿವೃದ್ಧಿ ಯೋಜನೆಯ ಲೆಕ್ಕಶೀರ್ಷಿಕೆ: 2225-04-102-0-05(103)ರಡಿ ಒದಗಿಸಿರುವ ರೂ.3500.00 ಲಕ್ಷಗಳ ಅನುದಾನದಲ್ಲಿ ಬೀದರ್‌ನಲ್ಲಿರುವ ಶ್ರೀ ನಾನಕ್ ಝೀರಾ ಸಾಹೇಬ್ ಗುರುದ್ವಾರದ ಅಭಿವೃದ್ಧಿಗಾಗಿ ರೂ.1.00 ಕೋಟಿ ಅನುದಾನವನ್ನು ಅವಶ್ಯಕತೆಗೆ ಅನುಗುಣವಾಗಿ ಬಳಸಿಕೊಳ್ಳುವಂತೆ ಮೇಲೆ ಓದಲಾದ (2)ರಲ್ಲಿನ ಆಯವ್ಯಯ ಸಲಹಾ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.

ಆಯವ್ಯಯ ಘೋಷಣೆಯನ್ವಯ ಬೀದರ್‌ನ ಶ್ರೀ ನಾನಕ್ ಝೀರಾ ಸಾಹೇಬ್ ಗುರುದ್ವಾರ ಸಂಸ್ಥೆಯ ಮುಖ್ಯಸ್ಥರು ರೂ.1.00 ಕೋಟಿ ವೆಚ್ಚದಲ್ಲಿ **Sewage Treatment Plant (STP)** ಅನ್ನು ನಿರ್ಮಿಸುವುದಾಗಿ ಕಾರ್ಯನಿರ್ವಾಹಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಬೀದರ್ ರವರು ಅಂದಾಜು ಪಟ್ಟಿಯನ್ನು ಸಲ್ಲಿಸಿದ್ದು, ಅದರಂತೆ, ಬೀದರ್‌ನಲ್ಲಿರುವ ಶ್ರೀ ನಾನಕ್ ಝೀರಾ ಸಾಹೇಬ್ ಗುರುದ್ವಾರ ಅಭಿವೃದ್ಧಿಗಾಗಿ **STP** ಕಾಮಗಾರಿಗಳನ್ನು ರೂ.1.00 ಕೋಟಿ ವೆಚ್ಚದಲ್ಲಿ ಪ್ರಸಕ್ತ ಸಾಲಿನ ಲೆಕ್ಕಶೀರ್ಷಿಕೆ: 2225-04-102-0-05(103)ರಡಿ ಜೈನ್, ಬೌದ್ಧ ಮತ್ತು ಸಿಖ್ ಸಮುದಾಯಗಳ ಅಭಿವೃದ್ಧಿ ರಾಜ್ಯವಲಯ ಯೋಜನೆಯಡಿ ಒದಗಿಸಿರುವ ಅನುದಾನದಲ್ಲಿ ನಿಗದಿಪಡಿಸಿದ ಮಾರ್ಗಸೂಚಿಗಳನುಸಾರ ಜಾರಿಗೊಳಿಸಲು ಸೂಕ್ತ ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿ ಮೇಲೆ ಓದಲಾದ ಕ್ರ.ಸಂ (3)ರಲ್ಲಿನ ಏಕಕಡತದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:MWD-MDS/210/2024, ಬೆಂಗಳೂರು, ದಿನಾಂಕ:07.06.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-197ರ ಘೋಷಣೆಯಂತೆ ಬೀದರ್‌ನ ಶ್ರೀ ನಾನಕ್ ಝೀರಾ ಸಾಹೇಬ್ ಗುರುದ್ವಾರದ ಅಭಿವೃದ್ಧಿಗಾಗಿ ರೂ.100.00ಲಕ್ಷ (ರೂಪಾಯಿ ಒಂದು ನೂರು ಲಕ್ಷಗಳು ಮಾತ್ರ) ಅನುದಾನದ ಮಿತಿಯಲ್ಲಿ **Sewage Treatment Plant (STP)** ಕಾಮಗಾರಿಗಳನ್ನು ಈ ಆದೇಶಕ್ಕೆ ಅನುಬಂಧಿಸಿರುವ ಮಾರ್ಗಸೂಚಿಗಳನುಸಾರ ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಲಾಗಿದೆ.

...2

Scanned with OKEN Scanner

ಈ ಯೋಜನೆಗೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ: 2225-04-102-0-05(103) ಜೈನ್, ಬೌದ್ಧ ಮತ್ತು ಸಿಖ್ ಸಮುದಾಯದ ಅಭಿವೃದ್ಧಿ ರಾಜ್ಯವಲಯ ಯೋಜನೆಯಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ-346/ವೆಚ್ಚ-3/2024 ದಿನಾಂಕ:15.05.2024ರಲ್ಲಿ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 35 ಐಎಂಎಂ 2024 ದಿನಾಂಕ:16.05.2024ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

7/6/2024.
(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು
ವಕ್ಫ್ ಇಲಾಖೆ

ಗೆ:

1. ಪ್ರಧಾನ ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು.
3. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ ಇಲಾಖೆ, ಬೆಂಗಳೂರು.
4. ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ, ಬೀದರ್. (ನಿರ್ದೇಶಕರ ಮುಖಾಂತರ)
5. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೀದರ್ ಜಿಲ್ಲೆ ಬೀದರ್. (ನಿರ್ದೇಶಕರ ಮುಖಾಂತರ)
6. ಖಜಾನಾಧಿಕಾರಿಗಳು, ಬೀದರ್ ಜಿಲ್ಲೆ ಬೀದರ್. (ನಿರ್ದೇಶಕರ ಮುಖಾಂತರ)
7. ನಿರ್ದೇಶಕರು, ಯೋಜನಾ ಇಲಾಖೆ, ಪಿಎಂಐ ವಿಭಾಗ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3&9), ವಿಧಾನಸೌಧ, ಬೆಂಗಳೂರು.
9. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
11. ಜಿಲ್ಲಾ ಅಧಿಕಾರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೀದರ್ ಜಿಲ್ಲೆ ಬೀದರ್. (ನಿರ್ದೇಶಕರ ಮುಖಾಂತರ)
12. ಸಮನ್ವಯ ಅಧಿಕಾರಿ, ಅಲ್ಪಸಂಖ್ಯಾತರ ಸಹಾಯವಾಣಿ ಕೇಂದ್ರ (24x7) ವಸಂತನಗರ, ಬೆಂಗಳೂರು.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with OKEN Scanner

**ಸರ್ಕಾರದ ಆದೇಶ ಸಂಖ್ಯೆ: MWD-MDS/210/2024 ದಿನಾಂಕ:07.06.2024 ಕ್ಕೆ ಅನುಬಂಧ**

**ಸಂಸ್ಥೆಯವರು ಸಲ್ಲಿಸಬೇಕಾದ ದಾಖಲೆಗಳು:-**

1. ಸಂಸ್ಥೆಯ ನೋಂದಣಿ ಪ್ರಮಾಣ ಪತ್ರ.
2. ಗುರುದ್ವಾರ/ಸಂಸ್ಥೆಯವರ 03 ವರ್ಷದ ವಾರ್ಷಿಕ ಲೆಕ್ಕಪತ್ರ (ಆಡಿಟ್ ವರದಿ) ಸಲ್ಲಿಸುವುದು.
3. ಕಾಮಗಾರಿಗಳ ಅಂದಾಜು ಪಟ್ಟಿಯನ್ನು ಸರ್ಕಾರಿ ಅಭಿಯಂತರರಿಂದ ತಯಾರಿಸುವುದು.
4. ಕಟ್ಟಡದ ನಕ್ಷೆಗೆ ಸ್ಥಳೀಯ, ನಗರಸಭೆ, ಪುರಸಭೆ, ಪಂಚಾಯಿತಿಗಳಿಂದ ಅನುಮೋದನೆ ಹಾಗೂ ಪರವಾನೆ ಪಡೆದಿರಬೇಕು.
5. ಸಂಸ್ಥೆಯ ಹೆಸರಿನಲ್ಲಿರುವ ನಿವೇಶನ ದಾಖಲೆ ಪತ್ರ.
6. ಸಂಸ್ಥೆಯ ಆಡಳಿತ ಮಂಡಳಿ ಪಟ್ಟಿ ಹಾಗೂ ಆಡಳಿತ ಮಂಡಳಿಯಲ್ಲಿ ಒಂದೇ ಕುಟುಂಬದ ಸದಸ್ಯರು ಇರತಕ್ಕದ್ದಲ್ಲ.
7. ಸಂಸ್ಥೆಯ ಕಾಮಗಾರಿಗಳನ್ನು ಪ್ರಾರಂಭಿಸುವ ಪೂರ್ವದ ಜಿ.ಪಿ.ಎಸ್ ಛಾಯಾಚಿತ್ರಗಳನ್ನು ಸಲ್ಲಿಸುವುದು.

**ಅರ್ಜಿ ಸಲ್ಲಿಸುವ ಮತ್ತು ಪ್ರಸ್ತಾವನೆಯ ಪ್ರಕ್ರಿಯೆ:-**

1. ಗುರುದ್ವಾರ/ಸಂಸ್ಥೆಯವರು ಅರ್ಜಿ ಹಾಗೂ ಎಲ್ಲಾ ದಾಖಲೆಗಳನ್ನು ಜಿಲ್ಲಾ ಅಧಿಕಾರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೀದರ್ ಜಿಲ್ಲೆ ಇವರಿಗೆ ಸಲ್ಲಿಸುವುದು.
2. ಜಿಲ್ಲಾ ಅಧಿಕಾರಿಗಳು ಪ್ರಸ್ತಾವನೆಯನ್ನು ಸಂಸ್ಥೆಯವರಿಂದ ಪಡೆದು ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ ರವರ ಶಿಫಾರಸ್ಸಿನೊಂದಿಗೆ ನಿರ್ದೇಶನಾಲಯಕ್ಕೆ ಸಲ್ಲಿಸುವುದು.
3. ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಅನುದಾನವನ್ನು ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ ರವರಿಗೆ ಬಿಡುಗಡೆ ಮಾಡುವುದು.

**ಇತರೆ ಷರತ್ತುಗಳು:-**

1. ಗುರುದ್ವಾರ/ಸಂಸ್ಥೆಗೆ ಅನುದಾನವನ್ನು ಹಂತ ಹಂತವಾಗಿ ಬಿಡುಗಡೆ ಮಾಡುವುದು.
2. ಗುರುದ್ವಾರ/ಸಂಸ್ಥೆಯವರು ಅಂತಿಮ ಕಂತಿನ ಅನುದಾನ ಬಿಡುಗಡೆಯಾದ 01 ವರ್ಷದೊಳಗಾಗಿ ಪೂರ್ಣ ಕಾಮಗಾರಿಯನ್ನು ಪೂರ್ಣಗೊಳಿಸತಕ್ಕದ್ದು.
3. ಸಾರ್ವಜನಿಕ ವಂತಿಕೆ ಹಾಗೂ ಸರ್ಕಾರದ ಅನುದಾನ ಉದ್ದೇಶಿತ ಕಾಮಗಾರಿಗೆ ಬಳಸಿರುವ ಬಗ್ಗೆ ಸರಿಯಾಗಿ ಲೆಕ್ಕ ಪತ್ರಗಳನ್ನು ನಿರ್ವಹಿಸತಕ್ಕದ್ದು ಹಾಗೂ ಲೆಕ್ಕ ಪರಿಶೋಧನೆ ಮಾಡಿಸಿ ಸಾರ್ವಜನಿಕ ಹಣ ಅಪವ್ಯಯ ಆಗದಂತೆ ಸಂಬಂಧಪಟ್ಟ ಗುರುದ್ವಾರ/ಸಂಸ್ಥೆಯವರು ನಿಗಾವಹಿಸುವುದು.
4. ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಉಪಯೋಗಿಸಿದ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಮೇಲು ಸಹಿಯೊಂದಿಗೆ ಹಣ ಬಳಕೆ ಪ್ರಮಾಣ ಪತ್ರವನ್ನು (Utilization Certificate) ನಿರ್ದೇಶನಾಲಯಕ್ಕೆ ಸಲ್ಲಿಸುವುದು.
5. ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆಗೊಳಿಸಲಾಗಿದೆಯೋ ಆ ಉದ್ದೇಶಕ್ಕೆ ಮಾತ್ರ ಉಪಯೋಗಿಸಿಕೊಳ್ಳುವುದು ಹಾಗೂ ಇದೇ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲಾಗಿದೆಯೇ ಎಂಬ ಬಗ್ಗೆ ಪರಿಶೀಲಿಸಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರು ವರದಿ ನೀಡುವುದು.

....2

Scanned with OKEN Scanner

6. ಕಾಮಗಾರಿ ಪ್ರಗತಿ ಹಾಗೂ ಕಾಮಗಾರಿಯು ಪೂರ್ಣವಾಗಿರುವ ಬಗ್ಗೆ ವರದಿಯನ್ನು ಜಿಲ್ಲಾ ಅಧಿಕಾರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ರವರು ಅಲ್ಪಸಂಖ್ಯಾತರ ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.
7. ಸರ್ಕಾರದ ಸಹಾಯನುದಾನವನ್ನು ದುರ್ಬಳಕೆ ಮಾಡಿಕೊಳ್ಳುವ ಗುರುದ್ವಾರ/ ಸಂಸ್ಥೆಯವರು ಬಗ್ಗೆ ಜಿಲ್ಲಾ ಅಧಿಕಾರಿಗಳು, ನಿರ್ದೇಶಕರು ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರಿಗೆ ಮಾಹಿತಿ ನೀಡಿ ಅಂತಹ ಸಂಸ್ಥೆಗಳಿಂದ ಸರ್ಕಾರದ ಅನುದಾನವನ್ನು ದಂಡ ಸಹಿತ ವಸೂಲಿ ಮಾಡಲು ಕ್ರಮವಹಿಸತಕ್ಕದ್ದು.
8. ಅನುದಾನ ಬಿಡುಗಡೆ ಮಾಡುವುದಕ್ಕೆ ಮುಂಚಿತವಾಗಿ ಅನುದಾನ ಪಡೆಯುವ ಗುರುದ್ವಾರ/ಸಂಸ್ಥೆಯವರು ಅನುದಾನ ಷರತ್ತುಗಳನ್ನು ಪಾಲಿಸುವುದಾಗಿಯೂ ಅದಕ್ಕೆ ತಪ್ಪಿದ್ದಲ್ಲಿ ತಾನು ಅನುದಾನದ ಸಂಪೂರ್ಣ ಮೊತ್ತವನ್ನು ಸರ್ಕಾರಕ್ಕೆ ಮರುಪಾವತಿಸಲು ಬದ್ಧನಾಗಿರುವುದಾಗಿ ಸರ್ಕಾರಕ್ಕೆ ಒಂದು ನಷ್ಟ ಭರ್ತಿ ಪ್ರಮಾಣ ಪತ್ರವನ್ನು ಛಾಪಾ ಕಾಗದದಲ್ಲಿ ಬರೆದು ಕೊಡತಕ್ಕದ್ದು.
9. ಲಭ್ಯವಿರುವ ಅನುದಾನದಿಂದ ನಿದಗಿತ ಅವಧಿಯಲ್ಲಿ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸುವ ಷರತ್ತುಗಳಿಗೆ ಒಳಪಟ್ಟು ಉಪಯೋಗಿಸಿಕೊಳ್ಳುವುದು.
10. ಕಾಮಗಾರಿಗಳನ್ನು ಪ್ರಾರಂಭಿಸುವ ಪೂರ್ವದ, ನಿರ್ವಹಣೆ ಸಮಯದ ಹಾಗೂ ಪೂರ್ಣಗೊಂಡ ನಂತರದ ಛಾಯಾಚಿತ್ರಗಳನ್ನು ಸಲ್ಲಿಸುವುದು.
11. ಸದರಿ ಗುರುದ್ವಾರ/ಸಂಸ್ಥೆಯವರು ಕಾಮಗಾರಿ ಸ್ಥಳದ ಮುಂಭಾಗದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಅನುದಾನ ಪಡೆದು ಅಭಿವೃದ್ಧಿ ಪಡಿಸಲಾಗಿದೆ ಎಂಬ ನಾಮ ಫಲಕವನ್ನು ಕಡ್ಡಾಯವಾಗಿ ಅಳವಡಿಸತಕ್ಕದ್ದು.
12. ಸದರಿ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಸಂಸ್ಥೆಗೆ ಅನುದಾನದ ಲಭ್ಯತೆಯನುಸಾರ ಬಿಡುಗಡೆ ಮಾಡಲಾಗುವುದು.

7/6/2024.
(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ.

Scanned with OKEN Scanner